**All India Radio: Bangalore**
**National Bulletin In Kannada**
**26.03.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**26.03.2026 19.35 hrs**
***************

ಮುಖ್ಯಾಂಶಗಳು

೧. ಪಶ್ಚಿಮ ಏಷ್ಯಾ ಸಂಘರ್ಷ: ದೇಶದ ಸನ್ನದ್ಧತೆ ಕುರಿತು ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ನಾಳೆ ಪ್ರಧಾನಿ ಸಮಾಲೋಚನೆ

೨. ಏಪ್ರಿಲ್ ೯ ರಂದು ನಡೆಯಲಿರುವ ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗೆ ನಾಮಪತ್ರಗಳ ಪರಿಶೀಲನೆ ಪೂರ್ಣ

೩. ದೇಶಾದ್ಯಂತ ಎಲ್‌ಪಿಜಿ ಕೊರತೆ ಇಲ್ಲ, ದೇಶೀಯ ಸಂಸ್ಕರಣಾಗಾರ ಉತ್ಪಾದನೆ ಶೇಕಡ ೪೦ರಷ್ಟು ಹೆಚ್ಚಳ: ಕೇಂದ್ರ ಸರ್ಕಾರ

೪. ಸಂವಹನ ಮೂಲಸೌಕರ್ಯ ನವೀಕರಿಸಲು, 'ಕವಚ್' ವಿಸ್ತರಣೆಗೆ ೧ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ಯೋಜನೆಗಳಿಗೆ ಭಾರತೀಯ ರೈಲ್ವೆ ಅನುಮೋದನೆ

***************

ಪಶ್ಚಿಮ ಏಷ್ಯಾದ ಸಂಘರ್ಷದ ಕುರಿತು ರಾಜ್ಯಗಳ ಸಿದ್ಧತೆ ಮತ್ತು ಯೋಜನೆಗಳನ್ನು ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ, ನಾಳೆ ಸಂಜೆ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಮಾಲೋಚನೆ ನಡೆಸಲಿದ್ದಾರೆ.

ಪಶ್ಚಿಮ ಏಷ್ಯಾ ಸಂಘರ್ಷದ ಹಿನ್ನೆಲೆಯಲ್ಲಿ ಪರಿಸ್ಥಿತಿಯನ್ನು ಸಂಘಟನಾತ್ಮಕವಾಗಿ ನಿಭಾಯಿಸಲು ಕೈಗೊಳ್ಳಬೇಕಾದ ಪೂರ್ವ ಸಿದ್ಧತೆಗಳು ಹಾಗೂ ಕಾರ್ಯಯೋಜನೆಗಳ ಬಗ್ಗೆ ಸಭೆಯಲ್ಲಿ ಚರ್ಚೆಯಾಗುವ ನಿರೀಕ್ಷೆಗಳಿವೆ.

ಕೇಂದ್ರ ಸರ್ಕಾರ ಈಗಾಗಲೇ ಕೈಗೊಂಡಿರುವ ಉಪಕ್ರಮಗಳು ಹಾಗೂ ರಾಜತಾಂತ್ರಿಕ ಪ್ರಯತ್ನಗಳ ಬಗ್ಗೆ ರಾಜ್ಯಗಳಿಗೆ ಮಾಹಿತಿ ನೀಡುವುದು ಸೇರಿದಂತೆ ಪೆಟ್ರೋಲಿಯಂ ಹಾಗೂ ಅಡುಗೆ ಅನಿಲ ಪೂರೈಕೆ ವ್ಯವಸ್ಥೆಯನ್ನು ನಿಭಾಯಿಸಲು ಪ್ರಧಾನಿ ಅವರು ಮುಖ್ಯಮಂತ್ರಿಗಳಿಗೆ ನಿರ್ದೇಶನ ನೀಡುವ ಸಾಧ್ಯತೆ ಇದೆ.

***************

ಏಪ್ರಿಲ್ ೯ ರಂದು ನಡೆಯಲಿರುವ ವಿಧಾನಸಭಾ ಚುನಾವಣೆಗೆ ನಾಮಪತ್ರಗಳ ಪರಿಶೀಲನೆ ನಂತರ ಅಂತಿಮವಾಗಿ ಕೇರಳದಲ್ಲಿ ೯೮೫ ಅಭ್ಯರ್ಥಿಗಳು ಮತ್ತು ಅಸ್ಸಾಂನಲ್ಲಿ ೭೮೯ ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ ಎಂದು ಭಾರತೀಯ ಚುನಾವಣಾ ಆಯೋಗ ತಿಳಿಸಿದೆ.

ಇದೇ ವೇಳೆ ಪುದುಚೇರಿಯಲ್ಲಿ, ೩೦ ವಿಧಾನಸಭಾ ಸ್ಥಾನಗಳಿಗೆ ಸ್ಪರ್ಧಿಸಲು ೩೬೬ ಅಭ್ಯರ್ಥಿಗಳು ಅಖೈರುಗೊಂಡಿದ್ದಾರೆ. ಏಪ್ರಿಲ್ ೯ ರಂದು ಚುನಾವಣೆ ನಡೆಯಲಿರುವ ಅಸ್ಸಾಂ, ಕೇರಳ ಹಾಗೂ ಕೇಂದ್ರಾಡಳಿತ ಪ್ರದೇಶ ಪುದುಚೇರಿಯಲ್ಲಿ ಮತ್ತು ನಾಲ್ಕು ರಾಜ್ಯಗಳಲ್ಲಿನ ಉಪಚುನಾವಣೆಗಳಲ್ಲಿ ನಾಮಪತ್ರ ಸಲ್ಲಿಸಲು ಮಾರ್ಚ್ ೨೩ ಕೊನೆಯ ದಿನವಾಗಿತ್ತು.

ಕರ್ನಾಟಕದ ಎರಡು ಸ್ಥಾನಗಳಿಗೆ ನಡೆಯುವ ಉಪಚುನಾವಣೆಗೆ ಅಂತಿಮವಾಗಿ ದಾವಣಗೆರೆಯಲ್ಲಿ ೨೫ ಅಭ್ಯರ್ಥಿಗಳು ಹಾಗೂ ಬಾಲಗಕೋಟೆಯಲ್ಲಿ ೯ ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ.

***************

ದೇಶದ ಪೆಟ್ರೋಲಿಯಂ ಮತ್ತು ಎಲ್‌ಪಿಜಿ ಪೂರೈಕೆ ಪರಿಸ್ಥಿತಿ ಸಂಪೂರ್ಣವಾಗಿ ನಿಯಂತ್ರಣದಲ್ಲಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಪುನರುಚ್ಚರಿಸಿದೆ.

ಎಲ್ಲಾ ಪೆಟ್ರೋಲ್ ಬಂಕ್‌ಗಳಲ್ಲಿ ಸಾಕಷ್ಟು ಇಂಧನ ದಾಸ್ತಾನಿದೆ ಮತ್ತು ದೇಶದಲ್ಲಿ ಎಲ್ಲಿಯೂ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಕೊರತೆಯಿಲ್ಲ ಎಂದು ಸಚಿವಾಲಯ ತಿಳಿಸಿದೆ.

ಅನಗತ್ಯ ಭೀತಿಯನ್ನು ಹರಡಲು ದುರುದ್ದೇಶದಿಂದ ನಡೆಸುತ್ತಿರುವ ಸಂಘಟಿತ ತಪ್ಪು ಮಾಹಿತಿಯ ಅಭಿಯಾನದಿಂದ ನಾಗರಿಕರು ದಾರಿ ತಪ್ಪಬಾರದು ಎಂದು ಸಚಿವಾಲಯ ಕರೆ ನೀಡಿದೆ.

ಭಾರತ ಇಂದು ಜಗತ್ತಿನ ೪೧ಕ್ಕೂ ಹೆಚ್ಚು ಪೂರೈಕೆದಾರರಿಂದ ಕಚ್ಚಾ ತೈಲವನ್ನು ಆಮದು ಮಾಡಿಕೊಳ್ಳಲಾಗುತ್ತಿದೆ. ಪ್ರತಿಯೊಂದು ಭಾರತೀಯ ಸಂಸ್ಕರಣಾಗಾರವು ಶೇಕಡ ೧೦೦ ರಷ್ಟು ಕಾರ್ಯನಿರ್ವಹಿಸುತ್ತಿದೆ.

ದೇಶಾದ್ಯಂತ ಎಲ್‌ಪಿಜಿ ಕೊರತೆ ಇಲ್ಲ. ದೇಶೀಯ ಸಂಸ್ಕರಣಾಗಾರ ಉತ್ಪಾದನೆಯನ್ನು ಶೇಕಡ ೪೦ರಷ್ಟು ಹೆಚ್ಚಿಸಲಾಗಿದೆ. ತೈಲ ಕಂಪನಿಗಳು ಪ್ರತಿ ದಿನ ೫೦ ಲಕ್ಷಕ್ಕೂ ಹೆಚ್ಚು ಎಲ್‌ಪಿಜಿ ಸಿಲಿಂಡರ್‌ಗಳನ್ನು ಯಶಸ್ವಿಯಾಗಿ ವಿತರಿಸುತ್ತಿದೆ. ವಾಣಿಜ್ಯ ಸಿಲಿಂಡರ್ ಹಂಚಿಕೆಯನ್ನು ಶೇಕಡ ೫೦ಕ್ಕೆ ಹೆಚ್ಚಿಸಲಾಗಿದೆ. ಅಮೆರಿಕಾ, ರಷ್ಯಾ, ಆಸ್ಟ್ರೇಲಿಯಾ ಮತ್ತು ಇತರ ದೇಶಗಳಿಂದ ಎಲ್‌ಪಿಜಿ ಆಮದು ಮಾಡಿಕೊಳ್ಳಲಾಗುತ್ತಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

***************

ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ನಡುವೆಯೂ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತದ ಆರ್ಥಿಕತೆ ಅತ್ಯಂತ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ಖಾಸಗಿ ಸುದ್ದಿ ವಾಹಿನಿ ಆಯೋಜಿಸಿದ್ದ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತ ತನ್ನ ಇಂಧನ ಸಂಪನ್ಮೂಲಗಳಿಗಾಗಿ ಇತರ ದೇಶಗಳ ಮೇಲೆ ಅವಲಂಬಿತವಾಗಿದೆ. ಆದರೂ ತನ್ನ ಇಂಧನ ಬಿಕ್ಕಟ್ಟನ್ನು ಉತ್ತಮವಾಗಿ ನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಭಾರತದ ಹಡಗುಗಳು ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತವಾಗಿ ಹಾದುಹೋಗುವುದನ್ನು ಮುಂದುವರೆಸುತ್ತವೆ. ಇದು ಭಾರತದ ಬಲವಾದ ರಾಜತಾಂತ್ರಿಕ ಸಂಪರ್ಕ ಮತ್ತು ಜಾಗತಿಕ ನಿಲುವನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವ ಕಿರಣ್ ರಿಜಿಜು ಪ್ರತಿಪಾದಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕಾ ಅಧ್ಯಕ್ಷರು, ಇಸ್ರೇಲ್ ಪ್ರಧಾನಿ, ಇರಾನ್ ಅಧ್ಯಕ್ಷರು ಮತ್ತು ಎಲ್ಲಾ ಗಲ್ಫ್ ರಾಷ್ಟ್ರಗಳ ಸರ್ಕಾರದ ಮುಖ್ಯಸ್ಥರು ಸೇರಿದಂತೆ ವಿಶ್ವನಾಯಕರೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾರೆ ಎಂದು ಅವರು ತಿಳಿಸಿದರು.

***************

ಭಾರತೀಯ ರೈಲ್ವೆ ತನ್ನ ಸಂವಹನ ಮೂಲಸೌಕರ್ಯವನ್ನು ನವೀಕರಿಸಲು ಮತ್ತು ಕವಚ್ ಸ್ವಯಂಚಾಲಿತ ರೈಲು ರಕ್ಷಣಾ ವ್ಯವಸ್ಥೆಯನ್ನು ವಿಸ್ತರಿಸಲು ೧ ಸಾವಿರದ ೨೦೦ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೌಲ್ಯದ ಯೋಜನೆಗಳನ್ನು ಅನುಮೋದಿಸಿದೆ.

ಸುಧಾರಿತ ಫೈಬರ್ ಸಂವಹನ ವ್ಯವಸ್ಥೆ ಮತ್ತು ವರ್ಧಿತ ಸುರಕ್ಷಿತಾ ಕಾರ್ಯ ವಿಧಾನಗಳ ಮೂಲಕ ರೈಲ್ವೆ ಜಾಲವನ್ನು ಬಲಪಡಿಸುವ ಗುರಿಯನ್ನು ಈ ಯೋಜನೆಗಳು ಹೊಂದಿವೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

೬೦೦ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೊತ್ತದಲ್ಲಿ ಕೇಂದ್ರ ರೈಲ್ವೆಯ ಎಲ್ಲಾ ಐದು ವಿಭಾಗಗಳಲ್ಲಿ ದೃಢವಾದ ಫೈಬರ್ ಸಂವಹನ ಜಾಲವನ್ನು ಸ್ಥಾಪಿಸಲು ಎರಡು ಪ್ರಮುಖ ಯೋಜನೆಗಳನ್ನು ಅನುಮೋದಿಸಲಾಗಿದೆ. ೩೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಕವಚ್ ೪.೦ ಸುರಕ್ಷತಾ ವ್ಯವಸ್ಥೆಯನ್ನು ಕರ್ನಾಟಕ, ತಮಿಳುನಾಡು ಮತ್ತು ಕೇರಳಾದ್ಯಂತ ೫೪೮ ಕಿಲೋಮೀಟರ್‌ಗಳಷ್ಟು ಸಂಚಾರ ದಟ್ಟಣೆಯ ಮಾರ್ಗಗಳಲ್ಲಿ ಅಳವಡಿಸಲಾಗುವುದು ಎಂದು ಸಚಿವಾಲಯ ಮಾಹಿತಿ ನೀಡಿದೆ.

***************

ದೇಶಾದ್ಯಂತ ಅಪಘಾತ ವಲಯವನ್ನು ಗುರುತಿಸಿ ಸರಿಪಡಿಸುವ ಮೂಲಕ ರಸ್ತೆ ಸುರಕ್ಷತೆಯನ್ನು ಸುಧಾರಿಸಲು ಕೇಂದ್ರ ಸರ್ಕಾರ ವ್ಯಾಪಕ ಕ್ರಮಗಳನ್ನು ಕೈಗೊಂಡಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ರಸ್ತೆ ಸುರಕ್ಷಾ ಅಭಿಯಾನ ೨೦೨೬ರಲ್ಲಿ ಬಾಲಿವುಡ್ ನಟ ಅಮಿರ್ ಖಾನ್ ಅವರೊಂದಿಗೆ ಸಂವಾದ ನಡೆಸಿದ ಸಚಿವರು, ರಸ್ತೆ ವಿನ್ಯಾಸ ಮತ್ತು ಸುರಕ್ಷತೆಯನ್ನು ಸುಧಾರಿಸಲು

೪೦ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಖರ್ಚು ಮಾಡಲಾಗಿದೆ. ಗುರುತಿಸಲಾದ ೩೫೦ ಅಪಘಾತ ವಲಯಗಳ ಪೈಕಿ ಈಗಾಗಲೇ ಸುಮಾರು ೨೮೦ ಅಪಘಾತ ವಲಯಗಳನ್ನು ಸರಿಪಡಿಸಲಾಗಿದೆ ಎಂದು ತಿಳಿಸಿದರು.

ದೇಶದ ಆಟೋಮೊಬೈಲ್ ಉದ್ಯಮವು ಇತ್ತೀಚಿನ ವರ್ಷಗಳಲ್ಲಿ ಗಮನಾರ್ಹ ಬೆಳವಣಿಗೆಯನ್ನು ಕಂಡಿದೆ. ಅಲ್ಲದೇ, ಜಾಗತಿಕವಾಗಿ ಮೂರನೇ ಅತಿದೊಡ್ಡ ರಾಷ್ಟ್ರವಾಗಿ ಹೊರಹೊಮ್ಮಿದೆ. ಮುಂದಿನ ಐದು ವರ್ಷಗಳಲ್ಲಿ ಈ ವಲಯದಲ್ಲಿ ಭಾರತವನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯುವ ದೃಷ್ಟಿಕೋನದೊಂದಿಗೆ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ಸಚಿವರು ಹೇಳಿದರು.

ಸುರಕ್ಷತೆಗಾಗಿ ವಾಹನಗಳಲ್ಲಿ ಆರು ಏರ್‌ಬ್ಯಾಗ್‌ಗಳನ್ನು ಕಡ್ಡಾಯಗೊಳಿಸಲಾಗಿದೆ. ಪರವಾನಗಿ ವ್ಯವಸ್ಥೆಯನ್ನು ಡಿಜಿಟಲೀಕರಣಗೊಳಿಸಲಾಗಿದೆ. ೨೦೦ಕ್ಕೂ ಹೆಚ್ಚು ಚಾಲನಾ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದ ಅವರು, ಯುವಜನರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಮಹತ್ವಾಕಾಂಕ್ಷಿ ಜಿಲ್ಲೆಗಳಲ್ಲಿ ಮೂಲಸಲಕರಣೆ ತಯಾರಕರ ಸೌಲಭ್ಯಗಳನ್ನು ಸ್ಥಾಪಿಸಲಾಗುವುದು ಎಂದು ಸಚಿವ ನಿತಿನ್ ಗಡ್ಕರಿ ಮಾಹಿತಿ ನೀಡಿದರು.

***************

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಇಂದು ಫ್ರಾನ್ಸ್‌ನ ಅಬ್ಬಾಯೆ ಡೆಸ್-ವೋಕ್ಸ್-ಡಿ-ಸೆರ್ನೆಯಲ್ಲಿ ಫ್ರಾನ್ಸ್ ವಿದೇಶಾಂಗ ಸಚಿವ ಜೀನ್-ನೋಯೆಲ್ ಬ್ಯಾರಟ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ಪಾಲುದಾರ ರಾಷ್ಟ್ರಗಳೊಂದಿಗೆ ಜಿ-೭ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲು ಡಾ.ಜೈಶಂಕರ್, ಎರಡು ದಿನಗಳ ಫ್ರಾನ್ಸ್ ಭೇಟಿಯಲ್ಲಿದ್ದಾರೆ.

***************

ಭಾರತ, ನಿರ್ಣಾಯಕ ಖನಿಜಗಳ ಅನ್ವೇಷಣೆಯನ್ನು ಹೆಚ್ಚಿಸುತ್ತಿದೆ, ನವೋದ್ಯಮ ಚಾಲಿತ ಗಣಿಗಾರಿಕೆ ಪರಿಸರ ವ್ಯವಸ್ಥೆಯನ್ನು ಪೋಷಿಸುತ್ತಿದೆ ಮತ್ತು ಆಮದು ಅವಲಂಬನೆಯನ್ನು ಕಡಿಮೆ

ಮಾಡಲು ಬಲವಾದ ದೇಶೀಯ ಮೌಲ್ಯಸರಪಳಿಗಳನ್ನು ನಿರ್ಮಿಸುತ್ತಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ಖನಿಜ ಪರಿಶೋಧನೆ ಮತ್ತು ಅಭಿವೃದ್ಧಿ ಟ್ರಸ್ಟ್‌ನ ಆಡಳಿತ ಮಂಡಳಿಯ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಲೀಥಿಯಮ್ ಮತ್ತು ಇತರ ನಿರ್ಣಾಯಕ ಖನಿಜಗಳ ಅನ್ವೇಷಣೆಯ ವೇಗವು ಜಾಗತಿಕ ಬೇಡಿಕೆ ಮತ್ತು ಭಾರತದ ಕಾರ್ಯತಂತ್ರದ ಅಗತ್ಯಗಳಿಗೆ ಹೊಂದಿಕೆಯಾಗಬೇಕು ಎಂದು ಪ್ರತಿಪಾದಿಸಿದರು.

ಆಮದು ಅವಲಂಬನೆಯನ್ನು ಕಡಿಮೆ ಮಾಡಲು ಸಂಸ್ಕರಣೆ ಮತ್ತು ಮೌಲ್ಯವರ್ಧನೆ ಸೇರಿದಂತೆ ಸಮಗ್ರ ದೇಶೀಯ ಪೂರೈಕೆ ಸರಪಳಿ ಅಗತ್ಯವಿದೆ ಎಂದು ಸಚಿವ ಡಾ.ಜಿತೇಂದ್ರ ಸಿಂಗ್ ಅಭಿಪ್ರಾಯಪಟ್ಟರು.

***************

ಪ್ಯಾರಿಸ್ ಒಪ್ಪಂದದ ಅಡಿಯಲ್ಲಿ ರಾಷ್ಟ್ರೀಯವಾಗಿ ನಿರ್ಧರಿಸಿದ ಕೊಡುಗೆಗಳನ್ನು ಪರಿಷ್ಕರಿಸುವ ಭಾರತದ ನಿರ್ಧಾರವನ್ನು ವಿಶ್ವಸಂಸ್ಥೆಯ ಹವಾಮಾನ ಮುಖ್ಯಸ್ಥ ಸೈಮನ್ ಸ್ಟೀಲ್ ಶ್ಲಾಘಿಸಿದ್ದಾರೆ.

ಇದು ಶುದ್ಧ ಇಂಧನ ವಿಸ್ತರಣೆ ಮತ್ತು ಆರ್ಥಿಕ ಬೆಳವಣಿಗೆ ಜೊತೆಜೊತೆಯಲ್ಲಿ ಸಾಗಬಹುದು ಎಂಬುದನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದ್ದಾರೆ.

ಭಾರತ, ಸೌರಶಕ್ತಿ ಕೇಂದ್ರವಾಗಿ ಮತ್ತು ನವೀಕರಿಸಬಹುದಾದ ಇಂಧನ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿದೆ. ನವೀಕರಿಸಿದ ಹವಾಮಾನ ಯೋಜನೆಯು ಪಳೆಯುಳಿಕೆಯಲ್ಲದ ಇಂಧನ ಶಕ್ತಿಯ ಪಾಲನ್ನು ವಿಸ್ತರಿಸುವ ಮೂಲಕ ದೇಶದ ಆರ್ಥಿಕತೆಯನ್ನು ಬಲಪಡಿಸುತ್ತದೆ. ಭಾರತದ ಈ ಕ್ರಮವು ಇಂಧನ ಮತ್ತು ವಿದ್ಯುತ್ ಚಲನಶೀಲತೆಯಲ್ಲಿ ಹೊಸ ಹೂಡಿಕೆಯ ಅಲೆಯನ್ನು ಬೆಂಬಲಿಸುತ್ತದೆ. ದೇಶೀಯ ಉತ್ಪಾದನೆಯನ್ನು ಬೆಂಬಲಿಸುತ್ತದೆ ಮತ್ತು ಲಕ್ಷಾಂತರ ಉತ್ತಮ ಉದ್ಯೋಗಗಳನ್ನು ಸೃಷ್ಟಿಸುತ್ತದೆ ಎಂದು ಸೈಮನ್ ಸ್ಟೀಲ್ ಅಭಿಪ್ರಾಯಪಟ್ಟಿದ್ದಾರೆ.

*******ಮುಕ್ತಾಯ********